ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಗುರುವಾರ,ದಿನಾಂಕ : 25ನೇ ಜುಲೈ, 2019

22. ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ವಿವಿಧ ಹುದ್ದೆಗಳ ನೇಮಕಾತಿ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

604 (626) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡುವ ಸಮಯದಲ್ಲಿ ಸರ್ಕಾರವು ಎಷ್ಟು ವರ್ಷಗಳ ಗರಿಷ್ಠ ವಯೋಮಿತಿಯನ್ನು ಸರ್ಕಾರ ನೇಮಕಾತಿಗಳಿಗೆ ನಿಗದಿಪಡಿಸಿದೆ ;

ವಿವಿಧ ಹುದ್ದೆಗಳಿಗೆ ನಿಗದಿಪಡಿಸಿದ ಗರಿಷ್ಠ ವಯೋಮಿತಿಯ ಮಾಹಿತಿ ನೀಡುವುದು;

(ಆ) ರಾಜ್ಯದಲ್ಲಿ ನಿರುದ್ಯೋಗಿಗಳ ಸಂಖ್ಯೆ ಏರುತ್ತಿರುವ ನಿಟ್ಟಿನಲ್ಲಿ ಸರ್ಕಾರಿ ನೇಮಕಾತಿಗಳಿಗೆ ಸಂಬಂಧಿಸಿದಂತೆ ಗರಿಷ್ಠ ವಯೋಮಿತಿಯ ಏರಿಕೆಯ ಪ್ರಸ್ತಾವ ಸರ್ಕಾರದ ಮುಂದಿದೆಯೇ ;

(ಇ) ಕರ್ನಾಟಕ ಲೋಕ ಸೇವಾ ಆಯೋಗ ನಡೆಸುವ ಮುಖ್ಯ ಪರೀಕ್ಷೆಗೆ ಸಂಬಂಧಿಸಿದಂತೆ ಎಷ್ಟು ವಿಷಯಗಳನ್ನು ಐಚ್ಛಿಕ ವಿಷಯಗಳನ್ನಾಗಿ ಆಯ್ಕೆ ಅಭ್ಯರ್ಥಿಗಳಿಗೆ ಅವಕಾಶ ನೀಡಲಾಗಿದೆ ;

(ಈ) ಕಳೆದ 5 ವರ್ಷಗಳಲ್ಲಿ ಕರ್ನಾಟಕ ಲೋಕ ಸೇವಾ ಆಯೋಗದ ಮುಖಾಂತರ ಸರ್ಕಾರವು ಎಷ್ಟು ಹುದ್ದೆಗಳನ್ನು ಭರ್ತಿ ಮಾಡಿದೆ? (ಇಲಾಖಾವಾರು ಹುದ್ದೆವಾರು ವಿವರ ನೀಡುವುದು)